VOLUME: 16 | 30 APRIL 2026 | ಗುರುವಾರ | RS: 2 | PAGE: 06 ISSUE: 84 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ದಕ್ಷಿಣ ಭಾರತದ ಖ್ಯಾತ ನಟಿ ಪೂಜಾ ಹೆಗ್ಡೆ ತಮ್ಮ ಮೂಲದ ಉಡುಪಿ ಜಿಲ್ಲೆಯ ಕುತ್ಯಾರು ಮೂಲದಬೆಟ್ಟು ನಾಗ ಬ್ರಹ್ಮಸ್ಥಾನದಲ್ಲಿ ನಡೆದ ಪವಿತ್ರ ಢಕ್ಕೆ ಬಲಿ ಸೇವೆಯಲ್ಲಿ ಭಾಗವಹಿಸಿ ಭಕ್ತರ ಗಮನ ಸೆಳೆದಿದ್ದಾರೆ. ಚಿತ್ರರಂಗದಲ್ಲಿ ಎತ್ತರಕ್ಕೇರಿದರೂ, ತಮ್ಮ ಸಂಸ್ಕೃತಿ ಮತ್ತು ಪರಂಪರೆಯೊಂದಿಗೆ ನಂಟು ಕಳೆದುಕೊಳ್ಳದ ಪೂಜಾ, ಅಪ್ಪಟ 'ಕುಡ್ಲದ ಪೊಣ್ಣು'ವಾಗಿ ಮಿಂಚಿದ್ದಾರೆ.


BHARATHA SARATHI
KANNADA DAILY NEWS PAPER
CALL 9740160069
# ಭಾರತ ಸಾರಥಿ
prabhavaa.com
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಪಂಚರಾಜ್ಯ ವಿಧಾನಸಭಾ ಚುನಾವಣೆ 2026: ಸಮಗ್ರ ಎಕ್ಸಿಟ್ ಪೋಲ್ ಸಮೀಕ್ಷೆ




**ಪಶ್ಚಿಮ ಬಂಗಾಳ**

| ಸಮೀಕ್ಷಾ ಸಂಸ್ಥೆ | ಬಿಜೆಪಿ+ | ಟಿಎಂಸಿ+ | ಇತರರು |
|---|---|---|---|
| | 138-159 | 131-152 | 01 |
| | | | 6-10 |
| | | | 2-6 (ಕಾಂಗ್) 00 |
| | | | 1 (ಕಾಂಗ್)) 3 |
| | | | 1-3 (ಕಾಂಗ್)) 1 |
| | | | 0-5 |

ದಾಖಲೆಯ ಮತದಾನ ಬಿಜೆಪಿಗೆ ವರದಾನ ಆಗೋ ಲಕ್ಷಣಗಳು ಕಾಣುತ್ತಿವೆ.

**ತಮಿಳುನಾಡು**

| ಸಮೀಕ್ಷಾ ಸಂಸ್ಥೆ | ಡಿಎಂಕೆ+ | ಎಐಎಡಿಎಂಕೆ+ | ಟಿವಿಕೆ (ವಿಜಯ್) |
|---|---|---|---|
| ಎಕ್ಸಿಸ್ ಮೈ ಇಂಡಿಯಾ | 92-110 | 22-32 | 98-120 |
| ಚಾಣಕ್ಯ ಸ್ಟ್ರಾಟಜೀ | 145-160 | 50-65 | 18-26 (ಇತರರು) |
| ಪಿಮಾರ್ಕ್ | 125-145 | 65-85 | 16-26 |
| ಕ್ವಾರ್ಟ್ ಪೋಲ್ | 100 | 28 | 26 |
| ಟೈಮ್ಸ್ ನೌ | 75-95 | 128-147 | 8-15 |
| ಮ್ಯಾಟ್ರಿಜ್ | 122-132 | 87-100 | 10-12 |
| ಪೀಪಲ್ಸ್ ಪಲ್ಸ್ | 125-145 | 65-80 | 18-24 (ಇತರೆ) |

ಡಿಎಂಕೆ ಸರ್ಕಾರ ಅಧಿಕಾರಕ್ಕೆ ಬರಲಿದೆ. ವಿಜಯ್ ನೇತೃತ್ವದ ಟಿವಿಕೆ ಪಾರ್ಟಿ ಅಬ್ಬರಿ ಫಲಿತಾಂಶದೆ.

**ಕೇರಳ**

| ಸಮೀಕ್ಷಾ ಸಂಸ್ಥೆ | ಯುಡಿಎಫ್ (ಕಾಂಗ್ರೆಸ್) | ಎಲ್‌ಡಿಎಫ್ (ಎಡರಂಗ) | ಬಿಜೆಪಿ |
|---|---|---|---|

**ಅಸ್ಸಾಂ**

| ಸಮೀಕ್ಷಾ ಸಂಸ್ಥೆ | ಎನ್‌ಡಿಎ (ಬಿಜೆಪಿ) | ಕಾಂಗ್ರೆಸ್+ (ಇಂಡಿ) | ಇತರರು |
|---|---|---|---|
| ಎಕ್ಸಿಸ್ ಮೈ ಇಂಡಿಯಾ | 88-100 | 24-36 | |
| ಪೋಲ್ ಡೈರಿ | 86-101 | 15-26 | 2-5 (ಎಐಯುಡಿಎಫ್) |
| ಟೈಮ್ಸ್ ನೌ | 88-101 | 23-33 | 02-05 |
| ಪಿಮಾರ್ಕ್ | 82-94 | 30-40 | 1-5 |
| ಮ್ಯಾಟ್ರಿಜ್ | 85-95 | 25-32 | 6-12 |

ಅಸ್ಸಾಂನಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರಲಿದೆ.

**ಪುದುಚೇರಿ**

| ಸಮೀಕ್ಷಾ ಸಂಸ್ಥೆ | ಎನ್‌ಡಿಎ (ಬಿಜೆಪಿ+) | ಕಾಂಗ್ರೆಸ್+ | ಇತರರು |
|---|---|---|---|
| ಎಕ್ಸಿಸ್ ಮೈ ಇಂಡಿಯಾ | 16-20 | 6-8 | 3-7 |
| ಪೀಪಲ್ಸ್ ಪಲ್ಸ್ | 16-19 | 10-12 | 1-2 |
| ಪ್ರಜಾ ಪೋಲ್ | 19-25 | 6-8 | |

ಪುದುಚೇರಿಯಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರಲಿದೆ.

**ಅಂತಿಮ ಫಲಿತಾಂಶ: May 4, 2026**



ಪ್ರಧಾನಿ ನರೇಂದ್ರ ಮೋದಿ ಕಾಶಿಗೆ ಭೇಟಿ ನೀಡಿ ವಿಶ್ವನಾಥನ ಆಶೀರ್ವಾದ ಪಡೆದಿದ್ದಾರೆ. ರೂಪುಗೊಂಡ ಸರ್ವಾರ್ಥ ಸಿದ್ಧಿ ಯೋಗ ಮತ್ತು ತ್ರಯೋದಶಿ ತಿಥಿಯ ಅತ್ಯಂತ ಶುಭ ಸಂದರ್ಭದಲ್ಲಿ ಅವರು ವಿಶ್ವನಾಥನಿಗೆ ವಿಶೇಷ ಪೂಜೆಗಳನ್ನು ಸಲ್ಲಿಸಿದ್ದಾರೆ. ಈ ದಿನದ ಜ್ಯೋತಿಷ್ಯ ಶಾಸ್ತ್ರದ ಮಹತ್ವವನ್ನು ಗಮನದಲ್ಲಿಟ್ಟುಕೊಂಡು, ಸುಮಾರು 30 ನಿಮಿಷಗಳ ಕಾಲ ಶಾಸ್ತ್ರೋಕ್ತವಾಗಿ ಶೋಡಶೋಪಚಾರ ವಿಧಾನದ ಮೂಲಕ ಪ್ರಧಾನಿಯವರು ಪ್ರಾರ್ಥನೆ ಸಲ್ಲಿಸಿದ್ದಾರೆ.

ಇದೊಂದು ಪ್ರತ್ಯೇಕ ಘಟನೆಯಾಗಿದ್ದು, ಜಿಲ್ಲೆಯಲ್ಲಿ ಬೆಸ್ಕಾಂ ಅಧಿಕಾರಿಗಳ ಮಿತಿಮೀರಿದ ನಿರ್ಲಕ್ಷ್ಯದಿಂದಾಗಿ 55 ವರ್ಷದ ವ್ಯಕ್ತಿಯೊಬ್ಬರು ದಾರುಣವಾಗಿ ಸಾವನ್ನಪ್ಪಿದ್ದಾರೆ. ಕೋಲಾರ ತಾಲ್ಲೂಕಿನ ಕೋಡಿಕಣ್ಣೂರು ಗ್ರಾಮದಲ್ಲಿ ಈ ಘಟನೆ ಸಂಭವಿಸಿದ್ದು, ಗ್ರಾಮಸ್ಥರು ವಿದ್ಯುತ್ ಇಲಾಖೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೋಡಿಕಣ್ಣೂರು ಗ್ರಾಮದ ನಿವಾಸಿ ಪ್ರಭು (55) ಅವರು ಗ್ರಾಮದ ಅಶ್ವಥಕಟ್ಟೆಯ ಮೇಲೆ ಕುಳಿತು ವಿಶ್ರಮಿಸುತ್ತಿದ್ದರು. ಈ ವೇಳೆ ಏಕಾಏಕಿ ಮೇಲಿದ್ದ ವಿದ್ಯುತ್ ತಂತಿಯು ತುಂಡಾಗಿ ಅವರ ಮೇಲೆ ಬಿದ್ದಿದೆ. ವಿದ್ಯುತ್ ಪ್ರವಾಹದ ತೀವ್ರತೆಗೆ ಪ್ರಭು ಅವರು ಗಂಭೀರವಾಗಿ ಗಾಯಗೊಂಡಿದ್ದರು.

# ಮೊದಲ ಮಳೆಗೆ 9 ಬಲಿ

ಬೆಂಗಳೂರು: ರಾಜಧಾನಿಯಲ್ಲಿ ಮಳೆಯ ಆರ್ಭಟ ಮುಂದುವರಿಯುತ್ತಿದ್ದು, ಇಂದು ಸಂಜೆ ಸಂಭವಿಸಿದ ಮಳೆಯ ಅವಾಂತರಗಳಿಗೆ ನಗರದಲ್ಲಿ ಮತ್ತೊಂದು ಬಲಿಯಾಗಿದೆ. ಜೆ.ಪಿ. ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಿದ್ಯುತ್ ತಂತಿ ಸ್ಪರ್ಶಿಸಿ ಯುವಕನೊಬ್ಬ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಇದಕ್ಕೂ ಮುನ್ನ ಶಿವಾಜಿನಗರದ ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿತದಿಂದ 7 ಜನರು ಸಾವನ್ನಪ್ಪಿದ್ದಾರೆ. ಇದರ ನಂತರ ಯಾರಬ್ ನಗರದಲ್ಲಿ ಮಳೆಯಲ್ಲಿ ಬೈಕ್ ಪಾರ್ಕ್ ಮಾಡುತ್ತಿದ್ದ ಸೈಯದ್ ಸೂಫಿಯಾನ್ ಎಂಬ ವಿದ್ಯಾರ್ಥಿ ವಿದ್ಯುತ್ ಶಾ[illegible]ಗೆ ಬಲಿಯಾಗಿದ್ದಾನೆ. ಇದೀಗ ಒಟ್ಟು ಒಂಬತ್ತು ಸಾವು ಸಂಭವಿಸಿದೆ.

ಜೆ.ಪಿ. ನಗರದ ಮಿನಿ ಫಾರೆಸ್ಟ್, 15ನೇ ಕ್ರಾಸ್ ಬಳಿ ಈ ದುರ್ಘಟನೆ ನಡೆದಿದೆ. ಸುಮಾರು 30–35 ವರ್ಷ ವಯಸ್ಸಿನ ರಘು ಎಂಬುವವರು ಮಳೆಯ ನಡುವೆ ಸಂಚರಿಸುತ್ತಿದ್ದಾಗ, ರಸ್ತೆಯಲ್ಲಿದ್ದ ವಿದ್ಯುತ್ ಕಂಬದ ಬಳಿ ಹರಿದುಬಿದ್ದಿದ್ದ ವಿದ್ಯುತ್ ತಂತಿ (ವೈರ್) ಟಚ್ ಆಗಿದ್ದರಿಂದ ತೀವ್ರವಾಗಿ ಶಾಕ್ ತಗುಲಿದೆ. ವಿದ್ಯುತ್ ಪ್ರವಾಹದ ತೀವ್ರತೆಗೆ ರಘು ಅವರು ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾರೆ.

ಘಟನಾ ಸ್ಥಳಕ್ಕೆ ಜೆ.ಪಿ. ನಗರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಬೆಸ್ಕಾಂ ಅಧಿಕಾರಿಗಳ ನಿರ್ಲಕ್ಷ್ಯವೇ ಈ ಸಾವಿಗೆ ಕಾರಣ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸುವ ಪ್ರಕ್ರಿಯೆ ನಡೆಯುತ್ತಿದೆ.

ಇದೊಂದು ಪ್ರತ್ಯೇಕ ಘಟನೆಯಾಗಿದ್ದು, ಜಿಲ್ಲೆಯಲ್ಲಿ ಬೆಸ್ಕಾಂ ಅಧಿಕಾರಿಗಳ ಮಿತಿಮೀರಿದ ನಿರ್ಲಕ್ಷ್ಯದಿಂದಾಗಿ 55 ವರ್ಷದ ವ್ಯಕ್ತಿಯೊಬ್ಬರು ದಾರುಣವಾಗಿ ಸಾವನ್ನಪ್ಪಿದ್ದಾರೆ. ಕೋಲಾರ ತಾಲ್ಲೂಕಿನ ಕೋಡಿಕಣ್ಣೂರು ಗ್ರಾಮದಲ್ಲಿ ಈ ಘಟನೆ ಸಂಭವಿಸಿದ್ದು, ಗ್ರಾಮಸ್ಥರು ವಿದ್ಯುತ್ ಇಲಾಖೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕೋಡಿಕಣ್ಣೂರು ಗ್ರಾಮದ ನಿವಾಸಿ ಪ್ರಭು (55) ಅವರು ಗ್ರಾಮದ ಅಶ್ವಥಕಟ್ಟೆಯ ಮೇಲೆ ಕುಳಿತು ವಿಶ್ರಮಿಸುತ್ತಿದ್ದರು. ಈ ವೇಳೆ ಏಕಾಏಕಿ ಮೇಲಿದ್ದ ವಿದ್ಯುತ್ ತಂತಿಯು ತುಂಡಾಗಿ ಅವರ ಮೇಲೆ ಬಿದ್ದಿದೆ. ವಿದ್ಯುತ್ ಪ್ರವಾಹದ ತೀವ್ರತೆಗೆ ಪ್ರಭು ಅವರು ಗಂಭೀರವಾಗಿ ಗಾಯಗೊಂಡಿದ್ದರು. ಕೂಡಲೇ ಅವರನ್ನು ಆಸ್ಪತ್ರೆಗೆ ದಾಖಲಿಸಲಾ ಯಿತಾದರೂ, ಚಿಕಿತ್ಸೆ ಫಲಕಾರಿಯಾಗದೆ ಅವರು ಕೊನೆಯುಸಿರೆಳೆದಿದ್ದಾರೆ.



ಹಳೆಯದಾದ ವಿದ್ಯುತ್ ತಂತಿಗಳನ್ನು ಬದಲಾಯಿಸದ ಬೆಸ್ಕಾಂ ಅಧಿಕಾರಿಗಳ ಅಜಾಗರೂಕತೆಯೇ ಈ ಸಾವಿಗೆ ನೇರ ಕಾರಣ ಎಂದು ಗ್ರಾಮಸ್ಥರು ಕಿಡಿಕಾರಿದ್ದಾರೆ. ಮೃತ ಪ್ರಭು ಅವರ ಕುಟುಂಬಕ್ಕೆ ಸರ್ಕಾರ ಮತ್ತು ಬೆಸ್ಕಾಂ ತಕ್ಷಣವೇ ದೊಡ್ಡ ಮೊತ್ತದ ಪರಿಹಾರ ನೀಡಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಕೋಲಾರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ನಗರದ ಮೆಟ್ರೋ ನಿಲ್ದಾಣದ ಬಳಿಯೇ ಮತ್ತೊಂದು ಅಪಾಯಕಾರಿ ಘಟನೆ ಸಂಭವಿಸಿದೆ. ವಿವೇಕಾನಂದ ಮೆಟ್ರೋ ನಿಲ್ದಾಣದ ಸಮೀಪ ರಕ್ಷಣಾ ಇಲಾಖೆಗೆ ಸೇರಿದ ಜಾಗದ ಕಾಂಪೌಂಡ್ ಗೋಡೆ ಕುಸಿದು ಬಿದ್ದಿದ್ದು, ಹದಿಹರೆಯದ ವಿದ್ಯಾರ್ಥಿಯೊಬ್ಬ ದುರಂತಕ್ಕೆ ಸಿಲುಕಿದ್ದಾನೆ. ಧಾರಾಕಾರವಾಗಿ ಸುರಿಯುತ್ತಿದ್ದ ಮಳೆಯ ಹಿನ್ನೆಲೆಯಲ್ಲಿ ವಿವೇಕಾನಂದ ಮೆಟ್ರೋ ನಿಲ್ದಾಣದ ಬಳಿ ಇದ್ದ ಗೋಡೆಯು ಏಕಾಏಕಿ ಕುಸಿದಿದೆ. ಈ ಸಂದರ್ಭದಲ್ಲಿ ಅಲ್ಲಿ ಸಂಚರಿಸುತ್ತಿದ್ದ



18 ವರ್ಷದ ವಿದ್ಯಾರ್ಥಿ ಜೋಸುವಾ ಎಂಬಾತನ ಮೇಲೆ ಗೋಡೆಯ ಭಾಗಗಳು ಬಿದ್ದಿವೆ.

ಘಟನೆಯಲ್ಲಿ ಜೋಸುವಾಗೆ ಗಂಭೀರ ಸ್ವರೂಪದ ಗಾಯಗಳಾಗಿದ್ದು, ತಕ್ಷಣವೇ ಸ್ಥಳೀಯರು ಆತನನ್ನು ರಕ್ಷಿಸಿ ಸಮೀಪದ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಸದ್ಯ ಜೋಸುವಾಗೆ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ಪರಿಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ.

ಮಳೆಯಿಂದಾಗಿ ನಗರದ ಹಲವು ಹಳೆಯ ಗೋಡೆಗಳು ಶಿಥಿಲಗೊಂಡಿದ್ದು, ಪಾದಚಾರಿಗಳು ಮತ್ತು ವಾಹನ ಸವಾರರು ಆತಂಕದಲ್ಲಿದ್ದಾರೆ.

# ಕಾಂಪೌಂಡ್ ಕುಸಿತ ಘಟನೆಯಿಂದ ಆಘಾತವಾಗಿದೆ: ಡಿಕೆಶಿ

ಬೆಂಗಳೂರು: "ಕಾಂಪೌಂಡ್ ಕುಸಿದು ಏಳು ಜನ ಮೃತಪಟ್ಟಿರುವುದು ಅತ್ಯಂತ ದುಃಖಕರ ವಿಚಾರ. ಇಂತಹ ಘಟನೆಗಳು ಆಗಬಾರದಿತ್ತು. ನನಗೂ ಇದರಿಂದ ಆಘಾತವಾಗಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಬೇಸರ ವ್ಯಕ್ತಪಡಿಸಿದರು. ಕಾಪೌಂಡ್ ಗೋಡೆ ಕುಸಿದು ಏಳು ಮಂದಿ ಮೃತಪಟ್ಟ ಹಾಗೂ ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿರುವ ಬೌರಿಂಗ್ ಆಸ್ಪತ್ರೆಗೆ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಬುಧವಾರ ರಾತ್ರಿ ಭೇಟಿ ನೀಡಿ ಮಾಹಿತಿ ಪಡೆದರು. ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

"ಏಳು ಜನ ಮೃತಪಟ್ಟಿದ್ದು, ಅದರಲ್ಲಿ 4 ಜನ ಬೀದಿ ಬದಿ ವ್ಯಾಪಾರಿಗಳು, ಇಬ್ಬರು ಕೇರಳದವರು. ಒಂದು ಮಗು ಸಾವನ್ನಪ್ಪಿದ್ದು, ಒಬ್ಬರ ಗುರುತು ಇನ್ನೂ ಸಿಕ್ಕಿಲ್ಲ. ಚಪ್ಪಲಿ ವ್ಯಾಪಾರಿ, ಬಟ್ಟೆ ವ್ಯಾಪಾರಿ ಮೃತಪಟ್ಟಿದ್ದಾರೆ. ಪ್ರವಾಸಕ್ಕೆ ಕೇರಳದಿಂದ ಬಂದವರು ಮೃತಪಟ್ಟಿದ್ದಾರೆ" ಎಂದರು.

"ಮರಗಳು, ಕೊಂಬೆಗಳು ಬಿದ್ದು ವಾಹನಗಳಿಗೂ ಹಾನಿಯಾಗಿದೆ. ನಾಳೆಯಿಂದಲೇ ದುರ್ಬಲ ಕೊಂಬೆಗಳನ್ನು ತೆರವುಗೊಳಿಸಲು ನಾನು ನಿರ್ದೇಶನ ನೀಡಿರುವೆ. ನಗರದಲ್ಲಿ ನೂರಕ್ಕೂ ಹೆಚ್ಚು ಕಡೆ ಮರ ಬಿದ್ದಿದ್ದು, ಅಪಾಯಕಾರಿಯಾಗಿರುವ ಮರ ಹಾಗೂ ಕೊಂಬೆಗಳನ್ನು ಗುರುತಿಸಿ, ತೆರವುಗೊಳಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿರುವೆ. ನಾನು ಕನಕಪುರದಿಂದ ಮರಳುವಾಗಲೂ ಅನೇಕ ಕಡೆಗಳಲ್ಲಿ ಮರ ಬಿದ್ದಿರುವುದನ್ನು ಗಮನಿಸಿದೆ" ಎಂದರು. "ಮುಖ್ಯಮಂತ್ರಿಗಳು ಮೃತರ ಕುಟುಂಬಕ್ಕೆ ಪರಿಹಾರ ಘೋಷಿಸಿದ್ದಾರೆ. ಇಲ್ಲಿ ಪರಿಹಾರಕ್ಕಿಂತ ಈ ಅಪಘಾತ ಸಂಭವಿಸಬಾರದಿತ್ತು. ಕೇರಳದ ಕುಟುಂಬಶ್ರೀ ಎನ್ನುವ ಸಂಸ್ಥೆಯ ಮುಖಾಂತರ 56 ಮಂದಿ ಪ್ರವಾಸಕ್ಕೆ ಬಂದಿದ್ದಾರೆ. ಕಮರ್ಷಿಯಲ್ ಸ್ಟ್ರೀಟ್ ಅಲ್ಲಿ ಶಾಪಿಂಗ್ ಗೆ ಬಂದಿದ್ದರು. ಆಗ ಮಳೆ ಬಂದಿದೆ. ಎಲ್ಲರಿಗೂ ಎಚ್ಚರಿಕೆ ನೀಡಿದ್ದಾರೆ. ಆಗ ಅವರು ಮಳೆಯಿಂದ ರಕ್ಷಣೆ ಪಡೆಯಲು ಗೋಡೆ ಪಕ್ಕ ಹೋಗಿದ್ದಾರೆ. ಆಗ 8 ಅಡಿ ಎತ್ತರದ ಗೋಡೆ ಕುಸಿದು ಮೃತಪಟ್ಟಿದ್ದಾರೆ. ಪ್ರೀತಿ, ಶೈಜಾ, ಶಿಜು ಎನ್ನುವ ಮೂವರು ಗಾಯಗೊಂಡಿದ್ದರು, ಈಗ ಚೇತರಿಸಿಕೊಂಡಿದ್ದಾರೆ" ಎಂದರು.

